# All India Radio: Bangalore
# National Bulletins In Kannada
# 02.07.2025 / 7.35 am

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**<><*<><>*><>**

**ಮುಖ್ಯಾಂಶಗಳು**

೧. ಇಂದಿನಿಂದ ಐದು ರಾಷ್ಟ್ರಗಳ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

೨. ಹೊಸ ಅಪರಾಧ ಕಾನೂನುಗಳಿಂದ ಭಾರತೀಯ ಕ್ರಿಮಿನಲ್ ನ್ಯಾಯ ವ್ಯವಸ್ಥೆಗೆ ಬುನಾದಿ - ಕೇಂದ್ರ ಸಚಿವ ಅಮಿತ್ ಶಾ

೩. ೨.೨ ಲಕ್ಷಕ್ಕೂ ಹೆಚ್ಚು ಗ್ರಾಮಗಳಿಗೆ ಭಾರತ್‌ನೆಟ್ ಸಂಪರ್ಕ; ಅಭೂತಪೂರ್ವ ಡಿಜಿಟಲ್ ಪರಿವರ್ತನೆಗೆ ಭಾರತ ಸಾಕ್ಷಿ

೪. ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ; ಎರಡನೇ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ೨೪ ರನ್‌ಗಳ ಜಯ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಇಂದು ಘಾನಾ, ಟ್ರಿನಿಡಾಡ್ ಮತ್ತು ಟೊಬೆಗೊ, ಅರ್ಜೆಂಟೀನಾ, ಬ್ರೆಜಿಲ್ ಮತ್ತು ನಮೀಬಿಯಾ ರಾಷ್ಟ್ರಗಳ ಪ್ರವಾಸ ಕೈಗೊಳ್ಳಲಿದ್ದಾರೆ. ಮೊದಲ ಹಂತದಲ್ಲಿ, ಪ್ರಧಾನಿ ಘಾನಾಗೆ ಭೇಟಿ ನೀಡಲಿದ್ದು, ಘಾನಾಗೆ ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಲಿದೆ. ಪ್ರಧಾನಿ, ಘಾನಾ ಅಧ್ಯಕ್ಷ ಜಾನ್ ಡ್ರಾಮಾನಿ ಮಹಾಮಾ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಈ ವೇಳೆ ಎರಡೂ ರಾಷ್ಟ್ರಗಳು ಬಲವಾದ ದ್ವಿಪಕ್ಷೀಯ ಪಾಲುದಾರಿಕೆ ಪರಿಶೀಲಿಸಲಿವೆ. ಜತೆಗೆ ಆರ್ಥಿಕ, ಇಂಧನ ಮತ್ತು ರಕ್ಷಣಾ ಸಹಯೋಗ ಹಾಗೂ ಅಭಿವೃದ್ಧಿ ಸಹಕಾರ ಪಾಲುದಾರಿಕೆಯನ್ನು ಹೆಚ್ಚಿಸುವ ಮತ್ತಷ್ಟು ಮಾರ್ಗಗಳ ಕುರಿತು ಚರ್ಚೆ ನಡೆಯಲಿದೆ. ಪ್ರವಾಸದ ಎರಡನೇ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ಟ್ರಿನಿಡಾಡ್ ಮತ್ತು ಟೊಬೆಗೊಗೆ ಭೇಟಿ ನೀಡಲಿದ್ದಾರೆ. ಅವರು ಟ್ರಿನಿಡಾಡ್ ಮತ್ತು ಟೊಬೆಗೊ ಅಧ್ಯಕ್ಷೆ ಕ್ರಿಸ್ಟೀನ್ ಕಾರ್ಲಾ ಕಂಗಲೂ ಮತ್ತು ಪ್ರಧಾನಿ ಕಮಲಾ ಪರ್ಸಾದ್-ಬಿಸ್ಸೆಸ್ಸರ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ದ್ವೀಪ ರಾಷ್ಟ್ರದ ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡುವ ನಿರೀಕ್ಷೆಯಿದೆ. ಶುಕ್ರವಾರ ಪ್ರಾರಂಭವಾಗುವ ಪ್ರವಾಸದ ಮೂರನೇ ಹಂತದಲ್ಲಿ, ಪ್ರಧಾನಿ ಅರ್ಜೆಂಟೀನಾಕ್ಕೆ ಪ್ರಯಾಣಿಸಲಿದ್ದಾರೆ. ಪ್ರಧಾನಿ ಅಧ್ಯಕ್ಷ ಮಿಲೀ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸುವ ನಿರೀಕ್ಷೆಯಿದೆ. ಇಬ್ಬರೂ ನಾಯಕರು ನಡೆಯುತ್ತಿರುವ ಸಹಕಾರವನ್ನು ಪರಿಶೀಲಿಸಲಿದ್ದಾರೆ. ಅಲ್ಲದೆ, ರಕ್ಷಣೆ, ಕೃಷಿ, ಗಣಿಗಾರಿಕೆ, ತೈಲ ಮತ್ತು ಅನಿಲ, ನವೀಕರಿಸಬಹುದಾದ ಇಂಧನ, ವ್ಯಾಪಾರ ಮತ್ತು ಹೂಡಿಕೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಭಾರತ-ಅರ್ಜೆಂಟೀನಾ ಪಾಲುದಾರಿಕೆಯನ್ನು ಮತ್ತಷ್ಟು ಹೆಚ್ಚಿಸುವ ಮಾರ್ಗಗಳನ್ನು ಚರ್ಚಿಸಲಿದ್ದಾರೆ. ಪ್ರವಾಸದ ನಾಲ್ಕನೇ ಹಂತದಲ್ಲಿ, ಪ್ರಧಾನಿಯವರು ಜುಲೈ ೫ ರಿಂದ ೮ ರವರೆಗೆ ಬ್ರೆಜಿಲ್‌ಗೆ ಪ್ರಯಾಣಿಸಲಿದ್ದು, ನಂತರ ೨೦೨೫ ರ ೧೭ ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದು ಪ್ರಧಾನಿಯವರ ಬ್ರೆಜಿಲ್‌ಗೆ ನಾಲ್ಕನೇ ಭೇಟಿಯಾಗಲಿದೆ. ಶೃಂಗಸಭೆಯ ಸಮಯದಲ್ಲಿ, ಪ್ರಧಾನ ಮಂತ್ರಿಯವರು ಜಾಗತಿಕ ಆಡಳಿತದ ಸುಧಾರಣೆ, ಶಾಂತಿ ಮತ್ತು ಭದ್ರತೆ, ಬಹುಪಕ್ಷೀಯತೆಯನ್ನು ಬಲಪಡಿಸುವುದು, ಕೃತಕ ಬುದ್ಧಿಮತ್ತೆಯ ಜವಾಬ್ದಾರಿಯುತ ಬಳಕೆ,

ಹವಾಮಾನ ಕ್ರಮ, ಜಾಗತಿಕ ಆರೋಗ್ಯ, ಆರ್ಥಿಕ ಮತ್ತು ಆರ್ಥಿಕ ವಿಷಯಗಳು ಸೇರಿದಂತೆ ಪ್ರಮುಖ ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ವಿದೇಶ ಪ್ರವಾದ ಕೊನೆಯ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಜುಲೈ ೯ ರಂದು ನಮೀಬಿಯಾಕ್ಕೆ ಭೇಟಿ ನೀಡಲಿದ್ದಾರೆ. ಇದು ನಮೀಬಿಯಾಕ್ಕೆ ಪ್ರಧಾನಿಯವರ ಮೊದಲ ಭೇಟಿಯಾಗಿದ್ದು, ಭಾರತದಿಂದ ನಮೀಬಿಯಾಕ್ಕೆ ಮೂರನೇ ಪ್ರಧಾನ ಮಂತ್ರಿ ಭೇಟಿಯಾಗಲಿದೆ. ಈ ಸಮಯದಲ್ಲಿ, ಪ್ರಧಾನಿಯವರು ಅಧ್ಯಕ್ಷ ನಂದಿ-ನದೈತ್ವಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

**<><*<><>*><>**

ಪ್ರಧಾನಿ ಮೋದಿಯವರ ನೇತೃತ್ವದಲ್ಲಿ ಜಾರಿಗೆ ತರಲಾದ ಮೂರು ಹೊಸ ಕ್ರಿಮಿನಲ್ ಕಾನೂನುಗಳು ನ್ಯಾಯಾಂಗ ಪ್ರಕ್ರಿಯೆ ಜನಸಾಮಾನ್ಯರಿಗೆ ಕೈಗೆಟುಕುವ ಮತ್ತು ಸುಲಭವಾಗಿ ತಲುಪುವುದಷ್ಟೇ ಅಲ್ಲದೆ, ಸರಳ, ಸ್ಥಿರ ಮತ್ತು ಪಾರದರ್ಶಕವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಹೊಸ ಕಾನೂನುಗಳು ಭಾರತೀಯ ನ್ಯಾಯ ಸಂಹಿತ, ಭಾರತೀಯ ನಾಗರಿಕ ಸುರಕ್ಷಾ ಸಂಹಿತ ಮತ್ತು ಭಾರತೀಯ ಸಾಕ್ಷ್ಯ ಆಡಳಿತ ಜಾರಿಗೊಂಡು ಯಶಸ್ವಿಯಾಗಿ ಒಂದು ವರ್ಷ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಪ್ರಧಾನಿಯವರ ನಾಯಕತ್ವದಲ್ಲಿ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಆಧರಿಸಿದ ಆಡಳಿತದ ಸುವರ್ಣ ಯುಗ ಆರಂಭವಾಗಲಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ದೇಶದ ಕ್ರಿಮಿನಲ್ ನ್ಯಾಯ ವ್ಯವಸ್ಥೆಯು ಹೊಸ ಯುಗವನ್ನು ಪ್ರವೇಶಿಸಲಿದೆ. ಇದರಿಂದ ನ್ಯಾಯ ತ್ವರಿತವಾಗಿ ದೊರಕುತ್ತದೆ ಎಂಬ ನಂಬಿಕೆ ಜನರಲ್ಲಿ ಮೂಡಿಸುತ್ತದೆ ಎಂದು ಅವರು ತಿಳಿಸಿದರು. ಹೊಸ ಕ್ರಿಮಿನಲ್ ಕಾನೂನುಗಳು ಮುಂಬರುವ ದಿನಗಳಲ್ಲಿ ಭಾರತೀಯ ಕ್ರಿಮಿನಲ್ ನ್ಯಾಯ ವ್ಯವಸ್ಥೆಯನ್ನು ಮೂಲಭೂತವಾಗಿ ಪರಿವರ್ತಿಸುತ್ತವೆ. ಸುಮಾರು ಮೂರು ವರ್ಷಗಳಲ್ಲಿ, ಈ ಕಾನೂನುಗಳ ಸಂಪೂರ್ಣ ಅನುಷ್ಠಾನದ ನಂತರ, ದೇಶದಲ್ಲಿ ಎಫ್ಐಆರ್ ದಾಖಲಿಸುವುದರಿಂದ ಹಿಡಿದು ಸುಪ್ರೀಂ ಕೋರ್ಟ್‌ವರೆಗೆ ನ್ಯಾಯವನ್ನು ಖಾತರಿಪಡಿಸುತ್ತದೆ ಎಂದು ಅವರು ಹೇಳಿದರು. ಭಾರತೀಯ ದಂಡ ಸಂಹಿತೆಯನ್ನು ಭಾರತೀಯ ನ್ಯಾಯ ಸಂಹಿತಾ ೨೦೨೩ ನೊಂದಿಗೆ ಬದಲಾಯಿಸಿದ ನಂತರ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ೨೦೨೩ ನೊಂದಿಗೆ ಸಿಆರ್‌ಪಿಸಿ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯನ್ನು ಭಾರತೀಯ ಸಾಕ್ಷ್ಯ ಅಧಿನಿಯಮ ೨೦೨೩ ನೊಂದಿಗೆ ಬದಲಾಯಿಸಿದ ನಂತರ, ಈ ಕಾನೂನುಗಳ ಉದ್ದೇಶ ಶಿಕ್ಷೆಯಲ್ಲ, ಬದಲಿಗೆ ನ್ಯಾಯ ಎತ್ತಿ ಹಿಡಿಯುದಾಗಿದೆ ಎಂದು ಅವರು ಹೇಳಿದ್ದಾರೆ. ೧೧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಇ-ಸಾಕ್ಷ್ಯ ಮತ್ತು ಇ-ಸಮನ್‌ಗಳ ಅಧಿಸೂಚನೆ ನೀಡಲಾಗಿದೆ. ೬ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ 'ನ್ಯಾಯ ಶ್ರುತಿ'ಗೆ ಅಧಿಸೂಚನೆ ನೀಡಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

**ಧ್ವನಿ: ಅಮಿತ್ ಶಾ ( ೨೬ ಸೆಕೆಂಡ್ಸ್)**

**<><*<><>*><>**

ಭಾರತದಲ್ಲಿ ೧೨೦ ಕೋಟಿ ಮೊಬೈಲ್ ಗ್ರಾಹಕರು, ೧೦೦ ಕೋಟಿ ಬ್ರಾಡ್‌ಬ್ಯಾಂಡ್ ಬಳಕೆದಾರರು ಮತ್ತು ೨.೨ ಲಕ್ಷಕ್ಕೂ ಹೆಚ್ಚು ಗ್ರಾಮಗಳು ಭಾರತ್‌ನೆಟ್ ಮೂಲಕ ಸಂಪರ್ಕ ಹೊಂದುವುದರೊಂದಿಗೆ ಭಾರತ ಅಭೂತಪೂರ್ವ ಡಿಜಿಟಲ್ ಪರಿವರ್ತನೆಗೆ ಸಾಕ್ಷಿಯಾಗಿದೆ ಎಂದು ಕೇಂದ್ರ ಸಂವಹನ ಮತ್ತು ಗ್ರಾಮೀಣಾಭಿವೃದ್ಧಿ ಖಾತೆ ರಾಜ್ಯ ಸಚಿವ ಡಾ. ಚಂದ್ರಶೇಖರ್ ಪೆಮ್ಮಸಾನಿ ಹೇಳಿದ್ದಾರೆ. ಬೆಂಗಳೂರಿನ ನಿಮ್ಹಾನ್ಸ್ ಕಾನ್ವೆನ್ಷನ್ ಹಾಲ್‌ನಲ್ಲಿ ದೂರಸಂಪರ್ಕ ಇಲಾಖೆ ಮತ್ತು ಭಾರತೀಯ ಮೊಬೈಲ್ ಆಪರೇಟರ್‌ಗಳ ಸಂಸ್ಥೆ ಸಿಒಎಐ ಅಔಂ| ಆಯೋಜಿಸಿದ್ದ ರೋಡ್ ಶೋ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ೪೦ ಸಾವಿರ ಹೆಚ್ಚುವರಿ ಗ್ರಾಮ ಪಂಚಾಯಿತಿಗಳು

ಮತ್ತು ೧.೫ ಕೋಟಿ ಗ್ರಾಮೀಣ ಕುಟುಂಬಗಳನ್ನು ವೇಗದ ಅಂತರ್ಜಾಲ ಸೇವೆಗೆ ಪ್ರವೇಶ ಒದಗಿಸಲು ೧ ಸಾವಿರದ ೮೦೦ ಕೋಟಿ ಡಾಲರ್‌ಗಿಂತ ಹೆಚ್ಚು ಹೂಡಿಕೆ ಮಾಡಲಾಗಿದೆ ಎಂದರು. "ಒಂದು ಕಾಲದಲ್ಲಿ ಶೇಕಡ ೭೫ ರಷ್ಟು ಮೊಬೈಲ್ ಸಾಧನಗಳನ್ನು ಭಾರತ ಆಮದು ಮಾಡಿಕೊಳ್ಳುತ್ತಿತ್ತು. ಇಂದು ವರ್ಷಕ್ಕೆ ೧.೮ ಟ್ರಿಲಿಯನ್ ಮೊತ್ತದ ಸಾಧನಗಳನ್ನು ಭಾರತ ರಫ್ತು ಮಾಡುತ್ತಿದೆ. ಇದು 'ಮೇಡ್ ಫಾರ್ ಇಂಡಿಯಾ' ಯಿಂದ 'ಮೇಡ್ ಬೈ ಇಂಡಿಯಾ'ಎಡೆಗಿನ ಮಹತ್ವದ ಬದಲಾವಣೆಯಾಗಿದೆ ಎಂದು ಸಚಿವರು ಹೇಳಿದರು. ಟೆಲಿಕಾಂ ತಂತ್ರಜ್ಞಾನ ಅಭಿವೃದ್ಧಿ ನಿಧಿಯ ಮೂಲಕ ೧೨೦ ಹೈಟೆಕ್ ಸ್ಟಾರ್ಟ್‌ಅಪ್‌ಗಳಿಗೆ ೫೦೦ ಕೋಟಿ ರೂಪಾಯಿ ನೆರವು ನೀಡಲಾಗಿದೆ ಎಂದು ಅವರು ಹೇಳಿದರು.

**<><*<><>*><>**

ಭಯೋತ್ಪಾದನೆ ವಿರುದ್ಧ ಪ್ರತಿಕ್ರಿಯಿಸುವ ಮತ್ತು ರಕ್ಷಿಸುವ ಮತ್ತು ಮುಂದಿನ ಯಾವುದೇ ಗಡಿಯಾಚೆಗಿನ ದಾಳಿಗಳನ್ನು ತಡೆಯುವ ಹಕ್ಕನ್ನು ಭಾರತ ಕಾಯ್ದಿರಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರೊಂದಿಗಿನ ದೂರವಾಣಿ ಸಂಭಾಷಣೆ ನಡೆಸಿದ ರಕ್ಷಣಾ ಸಚಿವರು, ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತದ ಕ್ರಮಗಳು ಭಯೋತ್ಪಾದಕ ಮೂಲಸೌಕರ್ಯವನ್ನು ನಿಷ್ಕ್ರಿಯಗೊಳಿಸುವತ್ತ ಗಮನಹರಿಸಿದವು ಎಂದು ಹೇಳಿದರು. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಅಮೆರಿಕ ಭಾರತಕ್ಕೆ ನೀಡಿದ ಅಚಲ ಬೆಂಬಲಕ್ಕಾಗಿ ರಕ್ಷಣಾ ಸಚಿವರು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯ ದೀರ್ಘಕಾಲದ ದಾಖಲೆಯು ಜಾಗತಿಕವಾಗಿ ಕುಖ್ಯಾತಿ ಪಡೆದಿದ್ದು, ಭಯೋತ್ಪಾದಕರಿಗೆ ಸುರಕ್ಷಿತ ತಾಣವೂ ಆಗಿದೆ ಎಂದು ಅವರು ಒತ್ತಿ ಹೇಳಿದರು.

**<><*<><>*><>**

ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ-ಐಎಸ್‌ಎಸ್ ನಲ್ಲಿರುವ ಮೊದಲ ಭಾರತೀಯರಾದ ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಬಾಹ್ಯಾಕಾಶದಲ್ಲಿ ಸ್ನಾಯು ನಷ್ಟದ ಕುರಿತು ಅಧ್ಯಾಯನ ಮಾಡುವ ಒಂದು ಹೊಸ ಪ್ರಯೋಗವನ್ನು ಮುನ್ನಡೆಸುತ್ತಿದ್ದಾರೆ.

ಆಕ್ಸಿಯಮ್ ಸ್ಪೇಸ್‌ನ ಆಕ್ಸ್-೪ ಕಾರ್ಯಾಚರಣೆಯ ಭಾಗವಾಗಿ, ಸ್ನಾಯು ಕ್ಷೀಣತೆಯನ್ನು ತಡೆಯಬಹುದಾದ ಪೂರಕಗಳನ್ನು ಕಂಡುಹಿಡಿಯಲು ಶುಕ್ಲಾ ISS ನ ಕಿಬೊ ಮಾಡ್ಯೂಲ್‌ನಲ್ಲಿ ಸ್ನಾಯು ಕಾಂಡಕೋಶಕ್ಕೆ ಸಂಬಂಧಿಸಿದ ಅಧ್ಯಯನ ಮಾಡುತ್ತಿದ್ದಾರೆ.

**<><*<><>*><>**

ಇಂಗ್ಲೆಂಡ್‌ನ ಬ್ರಿಸ್ಟಲ್‌ನಲ್ಲಿರುವ ಸೀಟ್ ಯುನೀಕ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐದು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತದ ವನಿತೆಯರ ತಂಡ, ಇಂಗ್ಲೆಂಡ್ ವಿರುದ್ಧ ೨೪ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೮೧ ರನ್‌ಗಳಿಸಿತು. ಭಾರತದ ಪರ ಅಮನ್‌ಜೋತ್ ಕೌರ್, ಜೆಮಿಮಾಹ್ ರೊಡ್ರಿಗಸ್ ತಲಾ ೬೩, ಹಾಗೂ ರಿಚಾ ಘೋಷ್ ಗಳಿಸಿದ ೩೨ ರನ್, ತಂಡದ ಮೊತ್ತ ಹಿಗ್ಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿತು. ೧೮೨ ರನ್‌ಗಳ ಗುರಿ ಬೆನ್ನತ್ತಿದ ಇಂಗ್ಲೆಂಡ್, ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ಕಳೆದುಕೊಂಡು ೧೫೭ ರನ್‌ಗಳಿಸಲಷ್ಟೇ ಶಕ್ತವಾಯಿತು. ಬೌಲಿಂಗ್ ಹಾಗೂ ಬ್ಯಾಟಿಂಗ್‌ನಲ್ಲಿ ತಮ್ಮ ಅತ್ಯುತ್ತಮ ಆಟಕ್ಕಾಗಿ ಅಮನ್‌ಜೋತ್ ಕೌರ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು. ಈ ಗೆಲುವಿನ ಮೂಲಕ ಪ್ರಸ್ತುತ ಭಾರತ ೫ ಪಂದ್ಯಗಳ ಸರಣಿಯಲ್ಲಿ ೨-೦ ಅಂತರದಲ್ಲಿ ಮುನ್ನಡೆಯಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**